## ಸಂಘದ ಸರ್ವತೋಮುಖ ಅಭಿವೃದ್ಧಿಗೆ ಎಲ್ಲರ ಸಹಕಾರ ಅಗತ್ಯ



ಚಾಮರಾಜನಗರ, ಸಂಘದ ಸರ್ವತೋಮುಖ ಅಭಿವೃದ್ಧಿಗೆ ಎಲ್ಲಾ ಸರ್ವ ಸದಸ್ಯರ ಸಹಕಾರ ಅಗತ್ಯವಾಗಿದೆ ಎಂದು ಚಾಮರಾಜನಗರ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಅಧ್ಯಕ್ಷ ವಿ.ಪ್ರಭಾಕರ್ ತಿಳಿಸಿದರು.

ನಗರದ ವರ್ತಕರ ಭವನದಲ್ಲಿ ಚಾಮರಾಜನಗರ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ವತಿಯಿಂದ ನಡೆದ ಸರ್ವ ಸದಸ್ಯರ ಸಭೆ ಉದ್ಘಾಟಿಸಿ ಮಾತನಾಡಿದ ಅವರು ನಮ್ಮ ಸಂಸ್ಥೆಗೆ ಇನ್ನು ಹೆಚ್ಚಿನ ಸದಸ್ಯರನ್ನು ಸೇರ್ಪಡೆ ಮಾಡಲು ಪ್ರಯತ್ನಿಸುತ್ತಿದ್ದೇನೆ ಹಾಗೆಯೇ ಸರ್ಕಾರದಿಂದ ದೊರೆಯುವ ಸೌಲಭ್ಯಗಳನ್ನ ನಮ್ಮ ಸಂಸ್ಥೆಯ ಎಲ್ಲಾ ಫಲಾನುಭವಿಗಳಿಗೆ ತಲುಪುವಂತೆ ಮಾಡುತ್ತೇನೆ ಎಂದರು.

ಸಂಘದ ಸಹ ಕಾರ್ಯದರ್ಶಿ ಎಲ್. ಸುರೇಶ್ ಮಾತನಾಡಿ, ಶೀಘ್ರದಲ್ಲೇ ನಮ್ಮ ಸಂಸ್ಥೆಗೆ ಒಂದು ಎಕರೆ ಜಮೀನು ಹಾಗೂ ಶಿವಪುರದಲ್ಲಿರುವ ಕೈಗಾರಿಕಾ ಪ್ರದೇಶದಲ್ಲಿ ಹೊರ ಜಿಲ್ಲೆಯವರಿಗೆ ನೀಡಿರುವ ಕೈಗಾರಿಕಾ ಕಟ್ಟಡವನ್ನು ನಮ್ಮ ಜಿಲ್ಲೆಯ ಸ್ಥಳೀಯರಿಗೆ ನೀಡಬೇಕು ಅಲ್ಲದೆ ಬದನಗುಪ್ಪೆ-ಕೆಲ್ಲಂಬಳ್ಳಿ ಕೈಗಾರಿಕಾ ಪ್ರದೇಶಕ್ಕೆ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಹೆಸರನ್ನು ಇಡಬೇಕು ಎಂದು ಕೋರಿದರು. ಸಂಘದ ಖಜಾಂಚಿ ಸಿ.ಎ.. ನಾರಾಯಣ ಅವರು 2024–25ನೇ ಸಾಲಿನ ವಾರ್ಷಿಕ ವರದಿ ಮಂಡಿಸಿದರು. ಸಭೆಗೆ ಆಗಮಿಸಿದ್ದ ಎಲ್ಲಾ ಸದಸ್ಯರುಗೂ ತಮ್ಮ ಅನಿಸಿಕೆಗಳನ್ನು ಹಂಚಿಕೊಳ್ಳಲು ಮುಕ್ತ ಅವಕಾಶ ನೀಡಲಾಯಿತು.

ಇದೇ ವೇಳೆ ಸಂಸ್ಥೆ ವತಿಯಿಂದ ಮೂರು ಜನರಿಗೆ ಸನ್ಮಾನಿಸಿ ಗೌರವಿಸಲಾಯಿತು. ಅಲ್ಲದೆ ಕಾರ್ಯನಿರ್ವಾಹಕ ಮಂಡಳಿಗೆ ನೂತನವಾಗಿ ಅವಿರೋಧವಾಗಿ ಆಯ್ಕೆಯಾದ ಸಂಸ್ಥೆಯ ಎಲ್ಲಾ ಪದಾಧಿಕಾರಿಗಳಿಗೆ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷ ಜಿ.ಆರ್. ಗೋವಿಂದರಾಜು, ಮಲ್ಲಿಕಾರ್ಜುನಸ್ವಾಮಿ, ಬಿ. ಕೆ.ಪ್ರಕಾಶ್, ಗೌರವ ಕಾರ್ಯದರ್ಶಿ ಎನ್. ಪ್ರಸಾದ್, ಸಹ ಕಾರ್ಯದರ್ಶಿ ಎಲ್. ಸುರೇಶ್, ಖಜಾಂಚಿ ಸಿ.ಎ.ನಾರಾಯಣ, ನಿರ್ದೇಶಕ ಆರ್. ಯೋಗರಾಜು, ಆರ್. ಪ್ರಕಾಶ್ ಸ್ವಿತಾ ಎನ್.ಕೌಶಿಕ್, ಮಹಾ ಪೋಷಕರು ಹಾಗೂ ಖಾಯಂ ಆಹ್ವಾನಿತ ಜಿ.ಆರ್.ಅಶ್ವಥ್ ನಾರಾಯಣ, ಆರ್.ಶಿವಕುಮಾರ್ ಜಿ ನಾರಾಯಣ ಪ್ರಸಾದ್ ಗೌರವ ಕಾನೂನು ಸಲಹೆಗಾರ ಡಿ.ವೆಂಕಟಾಚಲ ಲೆಕ್ಕಪರಿಶೋಧಕ ಸಂತೋಷ್ ಕುಮಾರ್.ಜಿ, ವರ್ತಕರ ಸಂಘದ ಶಂಕರ್, ವರ್ತಕರ ಸಂಘ ಹಾಗೂ ಸೌಹಾರ್ದ ಸಹಕಾರ ಸಂಘದ ಪಿ.ಪ್ರಸಾದ್, ಗ್ರಾನೈಟ್ ಅಸೋಸಿಯೇಷನ್ ಅಧ್ಯಕ್ಷ ಜೆ.ಎಂ.ಹೆಗಡೆ, ಸಣ್ಣ ಕೈಗಾರಿಕೆ ಸಂಸ್ಥೆಯ ಜಯಸಿಂಹ, ದಲಿತ ಮಹಾಸಭಾ ರಾಜ್ಯ ಉಪಾಧ್ಯಕ್ಷ ವೆಂಕಟರಮಣಸ್ವಾಮಿ (ಪಾಪು), ರೋಟರಿ ಅಧ್ಯಕ್ಷ ಚಂದ್ರು ಸೇರಿದಂತೆ ಇತರರು ಇದ್ದರು.

## ಜ.1ರಂದು ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ

ಮಡಿಕೇರಿ:-ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದೊಂದಿಗೆ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ ಕಾರ್ಯಕ್ರಮವು 2026 ರ ಜನವರಿ, 01 ರಂದು ಬೆಳಗ್ಗೆ 11 ಗಂಟೆಗೆ ನಗರದ ಗಾಂಧಿ ಭವನದಲ್ಲಿ ನಡೆಯಲಿದೆ.

ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೊಡಗು ಜಿಲ್ಲಾ ಉಸ್ತುವಾರಿ ಸಚಿವರಾದ ಎನ್.ಎಸ್.ಭೋಸರಾಜು, ಶಾಸಕರಾದ ಡಾ.ಮಂತರ್ ಗೌಡ, ಮುಖ್ಯಮಂತ್ರಿ ಅವರ ಕಾನೂನು ಸಲಹೆಗಾರರು ಹಾಗೂ ಶಾಸಕರಾದ ಎ.ಎಸ್.ಪೊನ್ನಣ್ಣ, ಸಂಸದರಾದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ರಾಜ್ಯಸಭಾ ಸದಸ್ಯರಾದ ಅಜಯ್ ಮಾಕನ್, ವಿಧಾನ ಪರಿಷತ್ ಸದಸ್ಯರಾದ ಎಂ.ಪಿ.ಸುಜಾ ಕುಶಾಲಪ್ಪ, ಎಸ್.ಎಲ್.ಭೋಜೇಗೌಡ, ಡಾ.ಧನಂಜಯ ಸರ್ಜಿ, ಕರ್ನಾಟಕ ಕ್ರೀಡಾ ಪ್ರಾಧಿಕಾರದ ಉಪಾಧ್ಯಕ್ಷರಾದ ಸಿ.ಎಸ್.ಅರುಣ್ ಮಾಚಯ್ಯ, ನಗರಸಭೆ ಅಧ್ಯಕ್ಷರಾದ ಪಿ.ಕಲಾವತಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾ ಅಧ್ಯಕ್ಷರಾದ ತೀತಿರ ಧರ್ಮಜ ಉತ್ತಪ್ಪ, ಕೊಡಗು ಜಿಲ್ಲಾ ಪಂಚಾಯತ್ ಆಡಳಿತಾಧಿಕಾರಿ ಹಾಗೂ ಕೊಡಗು ಉಸ್ತುವಾರಿ ಕಾರ್ಯದರ್ಶಿ ಡಾ.ಎನ್.ವಿ.ಪ್ರಸಾದ್, ಕರ್ನಾಟಕ ರಾಜ್ಯ ವಿಶ್ವಕರ್ಮ ಸಮಾಜದ ಕೊಡಗು ಜಿಲ್ಲಾ ನಿರ್ದೇಶಕರಾದ ಕೆ.ಎಸ್.ಚಂದ್ರಶೇಖರ, ಜಿಲ್ಲಾ ವಿಶ್ವಕರ್ಮ ಒಕ್ಕೂಟದ ಅಧ್ಯಕ್ಷರಾದ ಎಸ್.ಜೆ.ದೇವದಾಸ್, ಮಡಿಕೇರಿ ತಾಲ್ಲೂಕು ವಿಶ್ವಕರ್ಮ ಸಮಾಜ ಸೇವಾ ಸಂಘದ ಅಧ್ಯಕ್ಷರಾದ ಜಗದೀಶ್ ಆಚಾರ್ಯ, ಕೊಡಗು ಜಿಲ್ಲಾ ವಿಶ್ವಕರ್ಮ ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಬಿ.ಬಿ.ನಾಗರಾಜು, ಕುಶಾಲನಗರ ನಿವೃತ್ತ ಕಲಾ ಶಿಕ್ಷಕರಾದ ಉ.ರಾ.ನಾಗೇಶ್, ಜಿಲ್ಲಾಧಿಕಾರಿ ವೆಂಕಟ್ ರಾಜಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್, ಜಿ.ಪಂ.ಸಿಇಒ ಆನಂದ್ ಪ್ರಕಾಶ್ ಮೀನಾ, ಹೆಚ್ಚುವರಿ ಜಿಲ್ಲಾಧಿಕಾರಿ ಆರ್.ಐಶ್ವರ್ಯ ಪಾಲ್ಗೊಳ್ಳಲಿದ್ದಾರೆ.

## ಎಎಸ್ ಐ ಯರಗಂಬಳ್ಳಿ ನಾಗನಾಯಕ ಇನ್ನಿಲ್ಲ

ಚಾಮರಾಜನಗರ, ತಾಲ್ಲೂಕಿನ ಸಂತೇಮರಹಳ್ಳಿ ಪೊಲೀಸ್ ಠಾಣೆಯಲ್ಲಿ ಅಸಿಸ್ಟೆಂಟ್ ಸಬ್ ಇನ್ಸೆಕ್ಟರ್ ಆಗಿ ಕಾರ್ಯ ನಿರ್ವಹಿಸಿಸುತ್ತಿದ್ದ



ನಾಗನಾಯಕ (51) ಅವರು ಇಂದು ಬೆಳಿಗ್ಗೆ ಹೃದಯಾಘಾತದಿಂದ ನಿಧನರಾಗಿದ್ದಾರೆ.

ಕಸ್ತೂರಿ ಜಾತ್ರಾ ಮಹೋತ್ಸವ ಅಂಗವಾಗಿ ಕೆಲ್ಲಂಬಳ್ಳಿ ಗ್ರಾಮದಲ್ಲಿ ರಾತ್ರಿಬಂದೋಬಸ್ತ್ ಕರ್ತವ್ಯ ಮುಗಿಸಿ ಮುಂಜಾನೆ ಮನೆಗೆ ಬಂದಿದ್ದಾರೆ. ಎದೆನೋವು ಎಂದು ನಗರದ ಜೆಎಸ್ಎಸ್ ಆಸ್ಪತ್ರೆಯಲ್ಲಿ ಚೀಟಿ ಬರೆಸಿ ಪರೀಕ್ಷೆಗೆ ಹಾಸಿಗೆ ಮೇಲೆ ಮಲಗಿ ಕೊನೆಯುಸಿರೆಳೆದರು. ಮೃತರು ಯಳಂದೂರು ತಾಲ್ಲೂಕಿನ ಯರಗಂಬಳ್ಳಿ ಗ್ರಾಮದವರು. ಅವರ ಅಂತ್ಯಕ್ರಿಯೆ ಸ್ವಗ್ರಾಮ ಯರಗಂಬಳ್ಳಿಯಲ್ಲಿ ನೆರವೇರಲಿದೆ.

# ದೇಶದ ಪ್ರಗತಿಗಾಗಿ ಹಲವಾರು ಜನಪರ ಯೋಜನೆಗಳು ಜಾರಿ

### ಸಿ.ಪುಟ್ಟರಂಗಶೆಟ್ಟಿ ಹೇಳಿಕೆ | ಜಿಲ್ಲಾ ಕಾಂಗ್ರೆಸ್ ಸಮಿತಿ ಕಚೇರಿಯಲ್ಲಿ 141ನೇ ಸಂಸ್ಥಾಪನಾ ದಿನಾಚರಣೆ

ಚಾಮರಾಜನಗರ, ನಗರದ ಜಿಲ್ಲಾ ಕಾಂಗ್ರೆಸ್ ಸಮಿತಿ ಕಚೇರಿಯಲ್ಲಿ ಭಾನುವಾರ 141 ನೇ ಕಾಂಗ್ರೆಸ್ ಸಂಸ್ಥಾಪನಾ ದಿನಾಚರಣೆ ಆಚರಿಸಲಾಯಿತು.

ಇದೇ ವೇಳೆ ಶಾಸಕ ಸಿ.ಪುಟ್ಟರಂಗಶೆಟ್ಟಿ ಮಾತನಾಡಿ, ಕಾಂಗ್ರೆಸ್ ಪಕ್ಷ ದೇಶದ ಪ್ರಗತಿಗಾಗಿ ಹಲವಾರು ಜನಪರ ಯೋಜನೆಗಳನ್ನು ಜಾರಿ ಮಾಡಿದೆ. ಸ್ವಾತಂತ್ರ ಸಂಗ್ರಾಮದಲ್ಲಿ ಬ್ರಿಟಿಷರ ವಿರುದ್ದ ದೇಶಕ್ಕಾಗಿ ಹೋರಾಡಿ ಪ್ರಾಣ ತೆತ್ತ ಅನೇಕ ಹಿರಿಯರಿದ್ದಾರೆ. ಇವರು ದಶಕಗಳ ಕಾಲ ಕಾಂಗ್ರೆಸ್ ಪಕ್ಷದ ಸಂಘಟನೆಗಾಗಿ ತಮ್ಮ ಜೀವ ಸವೆಸಿದ್ದಾರೆ. ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷಕ್ಕಾಗಿ ತ್ಯಾಗ ಮಾಡಿ ಸಂಘಟನೆಯನ್ನು ಬಲಪಡಿಸಿದ ಪಕ್ಷದ ಹಿರಿಯ ಮುಖಂಡರ ಇಂತ ಮಹನೀಯರನ್ನು ಸನ್ಮಾನಿಸುವ ಮೂಲಕ ಪಕ್ಷದ ವತಿಯಿಂದ ಗೌರವಿಸಲಾಗುತ್ತಿದೆ ಎಂದು ಹೇಳಿದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ, ಕಾಡಾ ಅಧ್ಯಕ್ಷ ಪಿ. ಮರಿಸ್ವಾಮಿ ಮಾತನಾಡಿ, ಕಾಂಗ್ರೆಸ್ ಪಕ್ಷ ಇತಿಹಾಸವನ್ನು ಹೊಂದಿರುವ ಪಕ್ಷವಾಗಿದ್ದು, ಕಾಂಗ್ರೆಸ್



ಪಕ್ಷದಿಂದ ಪ್ರಧಾನಿಗಳಾಗಿರುವ ಅನೇಕರು ದೇಶದ ಪ್ರಗತಿಗಾಗಿ ಹಲವಾರು ಯೋಜನೆಗಳನ್ನು ಕಾರ್ಯಗತ ಮಾಡಿದ್ದಾರೆ. ಹಸಿರು ಕ್ರಾಂತಿ, ಪಂಚವಾರ್ಷಿಕ ಯೋಜನೆ, ಆಹಾರ ಭದ್ರತೆ, ಉದ್ಯೋಗ ಖಾತರಿ ಯೋಜನೆ, ಅನ್ನದಾಸೋಹ ಸೇರಿದಂತೆ ಹಲವಾರು ಪ್ರಗತಿಪರ ಕಾರ್ಯಕ್ರಮ ರೂಪಿಸಿದ್ದಾರೆ. ಶೋಷಿತರ ಪರವಾಗಿ ಪಕ್ಷ ಸಾಕಷ್ಟು ಹೋರಾಟ ನಡೆಸಿಕೊಂಡು ಬಂದಿದೆ ಎಂದು ಹೇಳಿದರು.

ಇದೇ ವೇಳೆಯಲ್ಲಿ ಪಕ್ಷದ ಹಿರಿಯ ಮುಖಂಡರಾದ ಶತಾಯುಷಿ ಬಿಸಲವಾಡಿ ಚನ್ನಬಸಪ್ಪ, ಕೆ.ಕೆ.ಹುಂಡಿ ದೊಡ್ಡೇಗೌಡ, ರಾಚಯ್ಯ ಚಿಕ್ಕಕೆಂಪಿಹುಂಡಿ, ರಂಗಸ್ವಾಮಿ ವೆಂಕಟಯ್ಯನಛತ್ರ, ಅನ್ವರ್‌ಪಾಷ ಹೆಬ್ಬಸೂರು, ಹೊನ್ನಯ್ಯ ಅವರನ್ನು ಸನ್ಮಾನಿಸಿಲಾಯಿತು.

ಚುಡಾ ಅಧ್ಯಕ್ಷ ಮಹಮದ್ ಅಸ್ಗರ್ ಮುನ್ನಾ, ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಬಿ.ಕೆ.ರವಿಕುಮಾರ್, ಜಿಲ್ಲಾ ಕಾಂಗ್ರೆಸ್‌ಮಹಿಳಾ ಅಧ್ಯಕ್ಷೆ ಆರ್.ನಾಗರತ್ನ, ಜಿಲ್ಲಾ ಕಾಂಗ್ರೆಸ್ ಪ್ರದಾನ

ಕಾರ್ಯದರ್ಶಿ ಆರ್.ಮಹದೇವ್, ಜಿಲ್ಲಾ ಕಾಂಗ್ರೆಸ್ ಗ್ರಾಮಾಂತರ ಬ್ಲಾಕ್ ಅಧ್ಯಕ್ಷ ಎ.ಎಸ್. ಗುರುಸ್ವಾಮಿ, ನಾಮನಿರ್ದೇಶಿತ ಸದಸ್ಯ ಸ್ವಾಮಿ, ಕೆಡಿಪಿಸದಸ್ಯ ಶ್ರೀನಿವಾಸ್, ನಗರಸಭೆ ಮಾಜಿ ಅಧ್ಯಕ್ಷೆ ಚಿನ್ನಮ್ಮ, ಸದಸ್ಯೆ ಕಲಾವತಿ, ಗ್ರಾಮಾಂತರ ಮಹಿಳಾ ವಿಭಾಗದ ಅಧ್ಯಕ್ಷೆ ಶಕುಂತಲಾ, ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಮಧು ಸೂಧನ್, ಬಿಸಲವಾಡಿ ರವಿ, ರೋಟರಿ ಅಧ್ಯಕ್ಷ ಕಾಗಲವಾಡಿ ಚಂದ್ರು, ಗ್ರಾಪಂ ಮಾಜಿ ಅಧ್ಯಕ್ಷ ಶಿವಣ್ಣ, ನಾಗಯ್ಯ ನಾಗವಳ್ಳಿ ಹಾಗೂ ಇತರರು ಹಾಜರಿದ್ದರು.

# ವಿಜೃಂಭಣೆಯ ಕಸ್ತೂರು ಬಂಡಿ ಜಾತ್ರೆ

### 23 ಹಳ್ಳಿಗಳಲ್ಲಿ ಹಬ್ಬದ ಸಂಭ್ರಮ | ದೊಡ್ಡಮ್ಮತಾಯಿಗೆ ವಿಶೇಷ ಪೂಜೆ

ಚಾಮರಾಜನಗರ, ತಾಲೂಕಿನ ಕಸ್ತೂರು ಗ್ರಾಮದ ಹೊರ ವಲಯದಲ್ಲಿರುವ ದೊಡ್ಡಮ್ಮ ತಾಯಿ ದೇವಸ್ಥಾನದಲ್ಲಿ ಬಂಡಿ ಜಾತ್ರಾ ಮಹೋತ್ಸವ ಭಾನುವಾರ ವಿಜೃಂಭಣೆಯಿಂದ ನಡೆಯಿತು.

ಜಿಲ್ಲೆ, ರಾಜ್ಯದ ಇತರೆ ಜಿಲ್ಲೆಗಳಿಂದ ಆಗಮಿಸಿದ ಭಕ್ತಾದಿಗಳು ದೊಡ್ಡಮ್ಮ ತಾಯಿಯ ಪೂಜಾ ಕಾರ್ಯದಲ್ಲಿ ಭಾಗಿಯಾಗಿ ಧನ್ಯತಾಭಾವ ಮೆರೆದರು.

ಮುಂಜಾನೆಯಿಂದಲೇ ದೇವಸ್ಥಾನದಲ್ಲಿ ಸಾವಿರಾರು ಜನರು ಆಗಮಿಸಿ 16 ಗ್ರಾಮಗಳಿಂದ ಆಗಮಿಸುವ ಬಂಡಿಗಾಗಿ ಕಾಯುತ್ತಿದ್ದರು. ಮಧ್ಯಾಹ್ನದ ಹೊತ್ತಿಗೆ ಮೊದಲನೇ ಬಂಡಿ ಕಸ್ತೂರು ಗ್ರಾಮದ ಬಂಡಿ ದೊಡ್ಡಮ್ಮ ತಾಯಿ ವಿಗ್ರಹ ಹೊತ್ತು ಜಾತ್ರೆಯ ಅಂಗಳಕ್ಕೆ ಆಗಮಿಸಿ ದೇವಸ್ಥಾನದ ಸುತ್ತ ಪ್ರದಕ್ಷಿಣೆ ಹಾಕಿ ನಿಂತಿತು.

ಬಂಡಿಗೆ ದೇವಸ್ಥಾನದ ಅರ್ಚಕ ಪೂಜೆ ಸಲ್ಲಿಸಿ ತೀರ್ಥ ಪ್ರೋಕ್ಷಣೆ ಮಾಡುತ್ತಿದ್ದಂತೆಯೇ, ಸುತ್ತಲೂ ಕಾಯಿ ಹಿಡಿದು ನಿಂತಿದ್ದ ಭಕ್ತರು ಬಂಡಿಗೆ ಈಡುಗಾಯಿ ಒಡೆದು ಸಂಭ್ರಮಿಸಿದರು. ಈ ವೇಳೆಗೆ ದೊಡ್ಡಮ್ಮ ತಾಯಿ ದೇವಿಯ ಪೂಜೆಗೆ ಭಕ್ತಾದಿಗಳಿಗೆ ಅವಕಾಶ ಮಾಡಿಕೊಡಲಾಯಿತು.

ಜಾತ್ರೆಗೆ ಚಾಮರಾಜನಗರ ತಾಲ್ಲೂಕು ಹಾಗೂ ಮೈಸೂರು ಜಿಲ್ಲೆಯ ನಂಜನಗೂಡು ತಾಲ್ಲೂಕಿಗೆ ಸೇರಿದ ಗ್ರಾಮಗಳಲ್ಲಿ ಹಬ್ಬ ಆಚರಿಸುವುದರ ಜತೆಗೆ ಬಂಡಿ ಕಟ್ಟಿ ದೇವಸ್ಥಾನಕ್ಕೆ ಆಗಮಿಸಿ ಪೂಜೆ ಸಲ್ಲಿಸಿದರು.

ವಿಧ ವಿಧ ಅಲಂಕಾರ: ಕಸ್ತೂರು, ಭೋಗಾಪುರ, ಮರಿಯಾಲ, ಕಿರಗಸೂರು, ಸಪ್ಪಯ್ಯನಪುರ, ಕೆಲ್ಲಂಬಳ್ಳಿ, ಮೂಕಹಳ್ಳಿ, ಆನ ಹಳ್ಳಿ, ತೊರವಳ್ಳಿ, ಪುಟ್ಟೇಗೌಡನ ಹುಂಡಿ, ಪುಟ್ಟಯ್ಯನಹುಂಡಿ, ಹೊನ್ನೇಗೌಡನ ಹುಂಡಿ, ದಾಸನೂರು, ಚಿಕ್ಕಹೊಮ್ಮ, ದೊಡ್ಡಹೊಮ್ಮ, ಹಾಗೂ ಹೆಗ್ಗವಾಡಿ ಗ್ರಾಮಸ್ಥರು ತಮ್ಮ ಬಂಡಿಗಳನ್ನು ವಿವಿಧ ಬಗೆಯಲ್ಲಿ ಅಲಂಕರಿಸಿದ್ದರು.

ಎತ್ತುಗಳನ್ನು ಸಿಂಗರಿಸಿ ಬಂಡಿಗಳಿಗೆ ಬಾಳೆಗೊನೆ, ಎಳನೀರು, ರಂಗು ರಂಗಿನ ಬಣ್ಣದ ಪಟ್ಟಿ, ಹೂವಿನ ಹಾರಗಳು ಮತ್ತು ತಾವು ಬೆಳೆದಿದ್ದ ಫಸಲುಗಳನ್ನು ಕಟ್ಟಿದ್ದರು. ದೊಡ್ಡಮ್ಮ ತಾಯಿ ವಿಗ್ರಹವನ್ನು ಬಂಡಿಯಲ್ಲಿ ಕೂರಿಸಿ ಗ್ರಾಮಗಳಿಂದ ವಾದ್ಯ ಮೇಳಗಳೊಂದಿಗೆ ಜಾತ್ರೆಗೆ ಆಗಮಿಸಿದ್ದರು.

ಕಸ್ತೂರು ಬಂಡಿ ಮೊದಲಿಗೆ ಪೂಜೆ ಸಲ್ಲಿಸಿದ ನಂತರ ಒಂದರ ಹಿಂದೆ ಮತ್ತೊಂದು ಗ್ರಾಮಗಳ ಬಂಡಿಗಳು ಸಾಲು ಸಾಲಾಗಿ ಆಗಮಿಸಿ ಜಾತ್ರೆಗೆ ಮೆರುಗು ನೀಡಿದವು. ಸುತ್ತಮುತ್ತಲಿನ ಗ್ರಾಮಗಳಿಂದ ಕಾಲ್ನಡಿಗೆಯಲ್ಲಿ ಬಂದ ಭಕ್ತರು ಬಂಡಿಗಳು ಬಂದಾಗ ಕೇಕೆ ಹಾಕಿ , ಕುಣಿದು ಹುರಿದುಂಬಿಸಿದರು.

ಬಂಡಿಗಳು ಜಾತ್ರೆಗೆ ಆಗಮಿಸುತ್ತಿದ್ದಂತೆ ಭಕ್ತಾದಿಗಳು ಚಕ್ರಕ್ಕೆ ತೆಂಗಿನ ಕಾಯಿ ಒಡೆದು ಹರಕೆ ತೀರಿಸಿದರು.



**ಗ್ರಾಮಗಳಲ್ಲಿ ಸಂಭ್ರಮಾಚರಣೆ**

ಜಾತ್ರೆಗೆ ಬಂಡಿ ಕಟ್ಟುವ 16 ಗ್ರಾಮಗಳಲ್ಲದೆ, 23 ಗ್ರಾಮಗಳಲ್ಲಿ ಹಬ್ಬ ಆಚರಿಸಲಾಯಿತು. ಪ್ರತಿ ವರ್ಷ ಪುಷ್ಯ ಮಾಸ ಎರಡನೇ ಭಾನುವಾರ ಬಂಡಿ ಜತ್ರಾ ಮಹೋತ್ಸವ ನಡೆಯುತ್ತದೆ. ಹಬ್ಬ ಆಚರಿಸುವ ಗ್ರಾಮಗಳಲ್ಲಿ ಸಂಭ್ರಮ ಮನೆ ಮಾಡಿತ್ತು. ಬೀದಿಗಳನ್ನು ವಿದ್ಯುತ್ ದೀಪ ಹಾಗೂ ತಳಿರು ತೋರಣಗಳಿಂದ ಅಲಂಕರಿಸಲಾಗಿತ್ತು.

**ಬಿಗಿ ಬಂದೋಬಸ್**

ಜಾತ್ರೆಯನ್ನು ವ್ಯವಸ್ಥಿತವಾಗಿ ನಡೆಸಲು ತಾಲ್ಲೂಕು ಆಡಳಿತ ಸಕಲ ಸಿದ್ಧತೆ ನಡೆಸಿತ್ತು. ದೇವಾಲಯದ ಸುತ್ತಮುತ್ತ ಬಿಗಿ ಬಂದೋಬಸ್ತ್ ಏರ್ಪಡಿಸಲಾಗಿತ್ತು. ಜಾತ್ರೆಗೆ ಆಗಮಿಸುವ ಮುಖ್ಯ ರಸ್ತೆಯ ಎರಡು ಕಡೆಗಳಲ್ಲಿ ಪೊಲೀಸರು ಕಾವಲಿದ್ದರು. ದ್ವಿಚಕ್ರ ವಾಹನ ಸೇರಿದಂತೆ ಯಾವುದೇ ವಾಹನಗಳನ್ನು ಮುಂದಕ್ಕೆ ಬಿಡದೇ ದೂರದಲ್ಲಿ ನಿಲ್ಲುವಂತೆ ವ್ಯವಸ್ಥೆ ಮಾಡಿದ್ದರು.

**ಪಂಜಿನಸೇವೆ**

ಮಹಿಳೆಯರು ಪಂಜು ಉರಿಸಿ ದೊಡ್ಡಮ್ಮ ತಾಯಿಗೆ ಪೂಜೆ ಸಲ್ಲಿಸಿದರು. ಪಕ್ಕದಲ್ಲಿರುವ ಮಹದೇಶ್ವರಸ್ವಾಮಿ ದೇವಸ್ಥಾನದಲ್ಲೂ ಭಕ್ತರು ಪೂಜೆ ಸಲ್ಲಿಸಿದರು.

## ಹನುಮ ಜಯಂತೋತ್ಸವ ಯಶ್ವಸಿ: ಅಭಿನಂದನೆ



ಚಾಮರಾಜನಗರ, ನಗರದಲ್ಲಿ ಹನುಮ ಜಯಂತೋತ್ಸವ ಯಶಸ್ವಿಯಾಗಿ ನಡೆದ ಹಿನ್ನೆಲೆಯಲ್ಲಿ ಹನುಮ ಜಯಂತೋತ್ಸವ ಸಮಿತಿಯು ಅಭಿನಂದನೆ ಸಲ್ಲಿಸಲಾಯಿತು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಸಮಿತಿ ಅಧ್ಯಕ್ಷ ರಾಜು ಮಾತನಾಡಿ, ಶ್ರೀ ಹನುಮ ಜಯಂತೋತ್ಸವ ಸಮಿತಿ ವತಿಯಿಂದ ನಡೆದ 4ನೇ ವರ್ಷದ ಹನುಮ ಜಯಂತಿ ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸಿಕೊಟ್ಟ ಪೋಲಿಸ್ ಇಲಾಖೆ, ಕೆಇಬಿ, ನಗರಸಭೆ, ಮಾಧ್ಯಮ ಮಿತ್ರರು, ಸಂಘ, ಸಂಸ್ಥೆಗಳ ಮುಖ್ಯಸ್ಥರು, ಎಲ್ಲ ಗಣ್ಯರು, ಎಲ್ಲಾ ಕೋಮಿನ ಯಜಮಾನರು, ಮುಖಂಡರು ಗ್ರಾಮಸ್ಥರಿಗೆ ಈ ಮೂಲಕ ಅಭಿನಂದನೆ ಸಲ್ಲಿಸಿದರು ಶ್ರೀ ಹನುಮ ಜಯಂತೋತ್ಸವ ಸಮಿತಿ ಉಪಾಧ್ಯಕ್ಷ ಹರ್ಷದ್ ಗೌಡ ಮಾತನಾಡಿದರು. ಶ್ರೀ ಹನುಮ ಜಯಂತೋತ್ಸವ ಸಮಿತಿ ಉಪಾಧ್ಯಕ್ಷ ಶಿವು, ಸಂಚಾಲಕ ಪ್ರವೀಣ್ ಎಲ್.ಪ್ರಧಾನ ಕಾರ್ಯದರ್ಶಿ ಪೃಥ್ವಿರಾಜ್, ಕಾರ್ಯದರ್ಶಿ ಗಳಾದ ಲೋಹಿತ್, ಯಶವಂತ್, ಮಹೇಂದ್ರ, ಮಧುಸೂದನ್, ಜೆರಾಕ್ಸ್ ಮಂಜು, ಮನು,ಭಾನು, ಸಿದ್ದು ಹಾಜರಿದ್ದರು.

## ಪತ್ರಕರ್ತರ ಸಂಘದ ಪದಾಧಿಕಾರಿಗಳ ಆಯ್ಕೆ

ಗುಂಡ್ಲುಪೇಟೆ: ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷರಾಗಿ ಬಸವರಾಜು,ಪ್ರಧಾನ ಕಾರ್ಯ ದರ್ಶಿಯಾಗಿ ಲಕ್ಕೂರು ಚಂದ್ರು ಹಾಗೂ ಪದಾಧಿಕಾರಿಗಳು ಅವಿರೋಧವಾಗಿ ಆಯ್ಕೆಯಾದರು.

ಪಟ್ಟಣದ ಪ್ರವಾಸಿಮಂದಿರದಲ್ಲಿ ನಡೆದ ಚುನಾವಣೆ ಯಲ್ಲಿ ಸಂಘದ ನೂತನ ಪದಾಧಿಕಾರಿಗಳ ಅವಿರೋಧ ಆಯ್ಕೆಯನ್ನು ಮುಖ್ಯ ಚುನಾವಣಾಧಿಕಾರಿ ಎಂ.ಇ. ಮಂಜುನಾಥ್ ಘೋಷಣೆ ಮಾಡಿದರು. ಸಹಾಯಕ ಚುನಾವಣಾಧಿಕಾರಿಗಳಾಗಿ ಸಿ.ಮಹೇಂದ್ರ, ವಿಜಯ ಕುಮಾರ್ ಕರ್ತವ್ಯ ನಿರ್ವಹಿಸಿದರು. ಆಯ್ಕೆಯಾದ ನೂತನ ಪದಾಧಿಕಾರಿಗಳಿಗೆ ಚುನಾವಣಾಧಿಕಾರಿಗಳು ಪ್ರಮಾಣಪತ್ರ ವಿತರಣೆ ಮಾಡಿದರು.

**ನೂತನ ಪದಾಧಿಕಾರಿಗಳು**

ಸಂಘದ ಉಪಾಧ್ಯಕ್ಷರಾಗಿ ರಾಜೇಶ್ ಭಟ್ಟ,ಕೃಷ್ಣ ಗೋಪಾಲಸ್ವಾಮಿ ಕಾರ್ಯದರ್ಶಿಗಳಾಗಿ ಜನಾರ್ಧನ್, ಶೇಖರ್ ಖಜಾಂಚಿಯಾಗಿ ಮಣಿಕಂಠ ಅವಿರೋಧವಾಗಿ ಆಯ್ಕೆಯಾದರು. ನೂತನ ಪದಾಧಿಕಾರಿಗಳನ್ನು ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಸಿದ್ದಲಿಂಗಸ್ವಾಮಿ, ಪ್ರಧಾನ ಕಾರ್ಯದರ್ಶಿ ಲಕ್ಕೂರು ಪ್ರಸಾದ್, ಸನ್ಮಾನಿಸಿ ಅಭಿನಂದಿಸಿದರು.

ಜಿಲ್ಲಾ ಕಾರ್ಯನಿರತ ಪತ್ರಕರ್ತರ



ಸಂಘದ ಅಧ್ಯಕ್ಷ ಸಿದ್ದಲಿಂಗಸ್ವಾಮಿ ಮಾತನಾಡಿ, ಜಿಲ್ಲೆಯ ನಾಲ್ಕು ತಾಲೂಕು ಪತ್ರಕರ್ತರ ಸಂಘಕ್ಕೆ ಪದಾಧಿಕಾರಿಗಳು ಅವಿರೋಧವಾಗಿ ಆಯ್ಕೆಯಾಗಿರುವುದು ವಿಶೇಷವಾಗಿದ್ದು ರಾಜ್ಯ ಸಮಿತಿಯ ನಿರ್ದೇಶನದಂತೆ ಪಾರದರ್ಶಕವಾಗಿ ಲಿಖಿತವಾಗಿ ಚುನಾವಣಾ ನಡೆಸಲಾಗಿದೆ ಎಂದು ತಿಳಿಸಿದರು.

ಜಿಲ್ಲಾ ಚುನಾವಣಾ ಸಮಯದಲ್ಲಿ ನೀಡಿದ ಭರವಸೆಯಂತೆ ಪತ್ರಕರ್ತರಿಗೆ ಆರ್ಥಿಕವಾಗಿ ನೆರವು ನೀಡುವ ಉದ್ದೇಶದಿಂದ ಕ್ಷೇಮಾಭಿವೃದ್ಧಿ ಸ್ಥಾಪನೆ ಹಾಗೂ ತಾಲೂಕು ಕೇಂದ್ರಗಳಲ್ಲಿ ಪತ್ರಕರ್ತರ ಭವನ ನಿರ್ಮಾಣ ಮಾಡಲು ಮುಂದಾಗುವುದಾಗಿ ಹೇಳಿದರು.

ನೂತನ ಅಧ್ಯಕ್ಷ ಬಸವರಾಜು ಮಾತನಾಡಿ, ತಾಲೂಕಿನ ಪತ್ರಕರ್ತರ ಹಿತಕಾಯಲು ಬದ್ದನಾಗಿದ್ದು ಮುಂದಿನ ದಿನಗಳಲ್ಲಿ ತಾಲೂಕಿನಲ್ಲಿ ಪತ್ರಕರ್ತರ ಭವನ ನಿರ್ಮಾಣಕ್ಕೆ ಶ್ರಮಿಸುವುದಾಗಿ ಹೇಳಿದರು. ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಯಕಾರಣಿ ಸಮಿತಿಯ ಸದಸ್ಯರಾದ ಮಡಹಳ್ಳಿ ಮಹೇಶ್, ಎಂ.ಮಲ್ಲೇಶ್, ತಾಲೂಕು ಪತ್ರಕರ್ತರ ಸಂಘದ ಸದಸ್ಯರಾದ ಮಹೇಂದ್ರ, ವೀರನಪುರ ಮಲ್ಲೇಶ್, ದೊಡ್ಡತುಪ್ಪೂರು ಚಂದ್ರಶೇಖರ.ಪಿ, ದೇವರಹಳ್ಳಿ ಶಿವಕುಮಾರ್, ಪುಟ್ಟಸ್ವಾಮಿ, ಮಂಜುನಾಥ್, ಜಿ. ವೆಂಕಟೇಶ್, ಕಾಂತರಾಜು, ರಾಜಗೋಪಾಲ್ ಸೇರಿದಂತೆ ಇನ್ನಿತರರು ಇದ್ದರು.

# ರಾಜ್ಯ ಅಡವಿಟ್ಟು ಕೇರಳದೊಂದಿಗೆ ರಾಜಿ

ಮೈಸೂರು: ಕರ್ನಾಟಕದ ಮಾನ ಮತ್ತು ಗೌರವವನ್ನು ಬದಿಗಿಟ್ಟಿರುವ ರಾಜ್ಯ ಕಾಂಗ್ರೆಸ್ ಸರ್ಕಾರ ಕೇರಳ ರಾಜ್ಯದವರ ಜೊತೆ ರಾಜಿ ಮಾಡಿಕೊಂಡಿದ್ದಾರೆ ಎಂದು ರಾಜ್ಯ ಬಿಜೆಪಿ ವಕ್ತಾರ ಎಂ.ಜಿ.ಮಹೇಶ್ ಆರೋಪಿಸಿದರು.

ಈ ಸಂಬಂಧ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕೇರಳ ಸಿಎಂ ಪಿಣರಾಯಿ ವಿಜಯನ್ ಬೆಂಗಳೂರಿನ ಕೋಗಿಲು ಲೇಔಟ್ ಮನೆ ತೆರವು ಪ್ರಕರಣದ ಬಗ್ಗೆ ದನಿ ಎತ್ತಿದ್ದಾರೆ. ಕೇರಳದ ಮುಸ್ಲಿಂ ಓಟ್ ಬ್ಯಾಂಕ್ ಗಾಗಿ ವೇಣುಗೋಪಾಲ್ ಆದೇಶದಂತೆ ಅಲ್ಲಿನ ಸಂತ್ರಸ್ತರಿಗೆ ಮನೆ ಕಟ್ಟಿಸಿ ಕೊಡುತ್ತಿದ್ದಾರೆ. ಕೇರಳದ ಮುಸ್ಲಿಂ ಓಲೈಕೆಗೆ ಎಂತಹ ಕೆಲಸಕ್ಕಾದರೂ ಮಾಡುತ್ತಾರೆ. ಕೇರಳದಲ್ಲಿ ಭೂ ಕುಸಿತವಾದಾಗ ಅಲ್ಲಿನ ಜನರಿಗೆ ರಾಜ್ಯ ಸರ್ಕಾರ ಮನೆ ಕಟ್ಟಿಸಿಕೊಟ್ಟಿದೆ. ಕೇರಳದಲ್ಲಿ ಆನೆ ತುಳಿತವಾದಾಗ ಇಲ್ಲಿನ ರಾಜ್ಯ ಸರ್ಕಾರ ಪರಿಹಾರ ಕೊಡುತ್ತದೆ. ಧರ್ಮಸ್ಥಳದ ಪ್ರಕರಣದ ಬಗ್ಗೆ ಕೂಡ ಕೇರಳದ ವಿಧಾನಸಭೆಯಲ್ಲಿ ಚರ್ಚೆ ಮಾಡಿದ್ದಾರೆ. ಮುಸ್ಲಿಂ ಓಲೈಕೆಗೆ ಬಂಡಪುರದಲ್ಲಿ ರಾತ್ರಿ ಸಂಚಾರಕ್ಕೆ ಮುಕ್ತ ಮಾಡಲು ಮುಂದಾಗಿದ್ದಾರೆ. ರಾಹುಲ್ ಗಾಂಧಿ, ಪ್ರಿಯಾಂಕಾ ಗಾಂಧಿ, ವೇಣು ಗೋಪಾಲ್ ಆದೇಶಿದ ಕಾರ್ಯವನ್ನು ಚಾಚೂ ತಪ್ಪದೆ



ಪಾಲಿಸುತ್ತಾರೆಂದರು.

ಕರ್ನಾಟಕದ ಜನರು ಸೂರಿಲ್ಲದೆ ಪರಿತಪ್ಪಿಸುತ್ತಿದ್ದಾರೆ. ಆದರೆ, ರಾಜ್ಯ ಸರ್ಕಾರ ಓಟ್ ಬ್ಯಾಂಕ್ ಗಾಗಿ ಕೇರಳದ ಕೈಗೊಂಬೆಯಾಗಿ ಕೆಲಸ ಮಾಡುತ್ತದೆ. ಕರ್ನಾಟಕದಲ್ಲಿ ಡ್ರಗ್ ಫ್ಯಾಕ್ಟರಿ ಇದೆ. ಉಡ್ತಾ ಪಂಜಾಬ್ ತರಹ ಉಡ್ತಾ ಕರ್ನಾಟಕ ಆಗಿದೆ. ಮಹಾರಾಷ್ಟ್ರ ಪೋಲಿಸರು ಬೆಂಗಳೂರಿಗೆ ಬಂದು ಡ್ರಗ್ಸ್ ವಶ ಪಡಿಸಿಕೊಂಡಿದ್ದಾರೆ. ಗೃಹ ಸಚಿವ ಡಾ.ಜಿ.ಪರಮೇಶ್ವರ್ ವಿಫಲರಾಗಿದ್ದಾರೆ. ಡ್ರಗ್ಸ್ ದಂಧೆಯಲ್ಲಿ ಕಾಂಗ್ರೆಸ್ ನಾಯಕರು ಹಿಂದೆ ಮುಂದೆ ಇದ್ದಾರೆ. ಕರ್ನಾಟಕದ ಪೋಲಿಸ್ ದಕ್ಷತೆಯಿಂದ ಕೆಲಸ ಮಾಡುತ್ತಿಲ್ಲವೆಂದರು. ಮಾಧ್ಯಮ ವಕ್ತಾರ ಮಹೇಶ್ ರಾಜೇ ಅರಸ್ ಇದ್ದರು.

### ಜಯಸುಂದರ್ ಕರೆ | ಬಿಜೆಪಿ ಎಸ್‌ಟಿ ಮೋರ್ಚಾದ ಜಿಲ್ಲಾ ಮಟ್ಟದ ಕಾರ್ಯಾಗಾರ

# ಬೂತ್‌ಮಟ್ಟದಿಂದಲ್ಲೇ ಬಿಜೆಪಿ ಸದೃಢಗೊಳಿಸಿ

ಚಾಮರಾಜನಗರ, ಜಿಲ್ಲೆಯಲ್ಲಿ ತಳಮಟ್ಟದಿಂದಲ್ಲೇ ಪಕ್ಷವನ್ನು ಸದೃಢಗೊಳಿಸಲು ಸಜ್ಜಾಗಬೇಕು ಎಂದು ಬಿಜೆಪಿ ಎಸ್‌ಟಿ ಮೋರ್ಚಾದ ರಾಜ್ಯ ಕಾರ್ಯದರ್ಶಿ ಜಯಸುಂದರ್ ಹೇಳಿದರು.

ನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ನಡೆದ ಎಸ್‌ಟಿ ಮೋರ್ಚಾದ ಜಿಲ್ಲಾ ಮಟ್ಟದ ಕಾರ್ಯಾಗಾರದಲ್ಲಿ ಭಾಗವಹಿಸಿ ಮಾತನಾಡಿದರು. ಬಿಜೆಪಿ ಜಿಲ್ಲಾಧ್ಯಕ್ಷರಾದ ಸಿ.ಎಸ್.ನಿರಂಜನ್‌ಕುಮಾರ್ ಅವರ ಸೂಚನೆ ಮೇರೆಗೆ ಎಸ್‌ಟಿ ಮೋರ್ಚಾದ ಜಿಲ್ಲಾ ಮಟ್ಟದ ಕಾರ್ಯಾಗಾರವನ್ನು ಅಯೋಜಿಸಲಾಗಿದೆ ಇದರ ಉದ್ದೇಶ ಜಿಲ್ಲೆಯ ಎಂಟು ಮಂಡಲಗಳ ಪದಾಧಿಕಾರಿಗಳ ಪಟ್ಟಿ ಆಗಬೇಕಿದೆ. ಸಕ್ರೀಯ ಪದಾಧಿಕಾರಿಗಳ ಒಳ್ಳೆಯ ತಂಡವನ್ನು ರಚನೆ ಮಾಡಬೇಕಿದೆ ಎಂದರು.

ಆಯಾಯ ಮಂಡಲಗಳಲ್ಲಿ ಸಭೆ ಮಾಡಬೇಕು ಅ ಮೂಲಕ ಮುಂಬರುವ ಗ್ರಾಮ ಪಂಚಾಯಿತಿ, ನಗರಸಭಾ, ಜಿ.ಪಂ.ತಾ.ಪಂ., ಸ್ಥಳೀಯ ಸಂಸ್ಥೆಯಗಳ ಚುನಾವಣೆಯಲ್ಲಿ ಸಮುದಾಯ ಹೆಚ್ಚು ಯುವಕರನ್ನು ತೊಡಗಿಸಿ ಚುನಾವಣೆಯಲ್ಲಿ ಸ್ಪರ್ಧಿಸಲು ಹುರಿದುಂಬಿಸಿ



ಅವರಿಗೆ ಅಧಿಕಾರ ಕೊಡಿಸುವ ನಿಟ್ಟಿನಲ್ಲಿ ಈಗಿನಿಂದಲ್ಲೇ ಸಕ್ರಿಯರಾಗಬೇಕು. ಗ್ರಾಮ ಪಂಚಾಯಿತಿಯಲ್ಲಿ ಬಿಜೆಪಿ ಬೆಂಬಲಿತ ಅಭ್ಯರ್ಥಿಗಳು ಗೆದ್ದರೆ ಮುಂದಿನ ಚುನಾವಣೆಗಳಲ್ಲಿ ಬಿಜೆಪಿ ಬಹುಮತ ಗೆಲುವು ಸಾಧಿಸಲು ಸಾಧ್ಯವಾಗುತ್ತದೆ ಎಂದರು.

ಸಭೆ ಅಧ್ಯಕ್ಷತೆ ವಹಿಸಿದ್ದ ಎಸ್‌ಟಿ ಮೋರ್ಚಾದ ಜಿಲ್ಲಾಧ್ಯಕ್ಷ ಚಂದ್ರಶೇಖರ್ ಮಾತನಾಡಿ, ಎಲ್ಲ ಮಂಡಲ ಅಧ್ಯಕ್ಷರುಗಳು ತಮ್ಮ ಪದಾಧಿಕಾರಿಗಳ ಪಟ್ಟಿ ಮಾಡಿ ಪಕ್ಷದ ಸಂಘಟನೆಯನ್ನು ತಳಮಟ್ಟದಿಂದ ಸಂಘಟಿಸಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಎಸ್‌ಟಿ ಮೋರ್ಚಾದ ಜಿಲ್ಲಾ ಉಸ್ತುವಾರಿ ಮಹೇಶ್, ಗ್ರಾಮಾಂತರ ಮಂಡಲ ಅಧ್ಯಕ್ಷ ಕೆಂಪನಾಯಕ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹುತ್ತೂರು ನಾಗರಾಜು, ಯಾನಗಳ್ಳಿ ಕರಿನಾಯಕ, ಕಿಲಗೆರೆ ಬಂಗಾರು, ತೆರಕಣಾಂಬಿ ರಮೇಶ್, ಮಧು, ಉಡಿಗಾಲ ಮಹೇಶ್, ಪುಣಜನೂರು ಸೋಮು, ನಾಗೇಶ್ ಮಾಸ್ಟರ್, ರಘು, ಚಿಕ್ಕಾಟಿ ಶಿವಣ್ಣ, ಗುಂಡ್ಲುಪೇಟೆ ಮಂಡಲ ಅಧ್ಯಕ್ಷ ಮಂಜುನಾಥ್, ಕಿಟ್ಟಿ, ಚಂದ್ರೇಶ್, ಸೀಗಮಾರನಾಯಕ, ಬಿ.ರಾಮನಾಯಕ, ಸಿದ್ದಪ್ಪಾಜಿ ಇತರರು ಭಾಗವಹಿಸಿದ್ದರು.